# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** ಖಾಸಗಿ ಅನುದಾನಿತ ಪ್ರಾಥಮಿಕ, ಪ್ರೌಢಶಾಲೆಗಳ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಹೆಚ್ಚುವರಿ ವಿಭಾಗ/ವಿಷಯಗಳನ್ನು ಅನುದಾನಕ್ಕೆ ಒಳಪಡಿಸುವುದನ್ನು ರದ್ದುಪಡಿಸುವ ಬಗ್ಗೆ.

**ಓದಲಾಗಿದೆ :** ದಿನಾಂಕ: 28-10-1996ರ ಆದೇಶ ಸಂಖ್ಯೆ, ಇಡಿ 155 ಎಸ್‌ಒಹೆಚ್ 95(ಭಾಗ).

* * * * *

**ಪ್ರಸ್ತಾವನೆ :-**

ಮೇಲೆ (1) ರಲ್ಲಿ ಓದಲಾದ ದಿನಾಂಕ: 28-10-1996ರ ಆದೇಶದಲ್ಲಿ ರಾಜ್ಯದಲ್ಲಿನ ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳು ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿನ ಹೆಚ್ಚುವರಿ ವಿಭಾಗ/ವಿಷಯಗಳಲ್ಲಿನ ಹುದ್ದೆಗಳಿಗೆ ನೇಮಕವಾದವರನ್ನು ಶೇ.3ರ ಅನುದಾನದ ಅಡಿಯಲ್ಲಿ ವೇತನಾನುದಾನಕ್ಕೆ ಒಳಪಡಿಸಲು ತಾತ್ಕಾಲಿಕವಾಗಿ ಸೇವೆ ಸಲ್ಲಿಸುತ್ತಿರುವ 159 ಹೆಚ್ಚುವರಿ ಉಪನ್ಯಾಸಕರ ಸೇವೆಯನ್ನು ಕೆಲವು ಷರತ್ತುಗಳೊಂದಿಗೆ ಆಸ್ಪದ ಕಲ್ಪಿಸಲಾಗಿರುತ್ತದೆ. ಸರ್ಕಾರವು ಈ ಯೋಜನೆಯನ್ನು ಮರು ಪರಿಶೀಲಿಸಿ ಈ ರೀತಿ ಶೇ.3ರ ಅನುದಾನದಡಿಯಲ್ಲಿನ ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿನ ಹೆಚ್ಚುವರಿ ವಿಭಾಗ/ವಿಷಯದಲ್ಲಿ ಇನ್ನು ಮುಂದೆ ನೇಮಕಾತಿಗಳನ್ನು ಮಾಡಿಕೊಳ್ಳಬಾರದೆಂದು 159 ಅರ್ಹ ಪ್ರಕರಣಗಳನ್ನು ಶೇ.3ರ ಅನುದಾನದ ಅಡಿಯಲ್ಲಿ ತರಲು ಸಹಮತಿಸುತ್ತಾ, ದಿನಾಂಕ: 28-10-1996ರ ಆದೇಶವನ್ನು ಹಿಂದಕ್ಕೆ ಪಡೆದು ರದ್ದುಪಡಿಸಲು ನಿರ್ಧರಿಸಿದೆ.

## ಸರ್ಕಾರಿ ಆದೇಶ ಸಂಖ್ಯೆ: ಇಡಿ 19 ಟಿಪಿಯು 2004, ಬೆಂಗಳೂರು, ದಿನಾಂಕ 01ನೇ ಫೆಬ್ರವರಿ 2006.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಹೆಚ್ಚುವರಿ ವಿಷಯ/ವಿಭಾಗಕ್ಕೆ ಶೇ. 3ರ ಅನುದಾನದ ಅಡಿಯಲ್ಲಿ ಹೆಚ್ಚುವರಿ ಹುದ್ದೆಗಳನ್ನು ವೇತನಾನುದಾನವನ್ನು ಒಳಪಡಿಸುವ ಯೋಜನೆಯನ್ನು ಈ ತಕ್ಷಣದಿಂದ ಜಾರಿಗೆ ಬರುವಂತೆ ಹಿಂದಕ್ಕೆ ಪಡೆಯಲಾಗಿದೆ ಮತ್ತು ದಿನಾಂಕ: 28-10-1996ರ ಸರ್ಕಾರಿ ಆದೇಶ ಸಂಖ್ಯೆ. ಇಡಿ 155 ಎಸ್‌ಒಹೆಚ್ 95ರ ಆದೇಶವನ್ನು ಈ ಮೂಲಕ ಹಿಂದಕ್ಕೆ ಪಡೆದು ರದ್ದುಪಡಿಸಿದೆ.

ಇನ್ನು ಮುಂದೆ ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಾಗಲೀ ಮತ್ತು ಪದವಿ ಪೂರ್ವ ನಿರ್ದೇಶನಾಲಯದಲ್ಲಾಗಲೀ ಯಾವುದೇ ಹೆಚ್ಚುವರಿ ಶಿಕ್ಷಕರ ನೇಮಕಾತಿಯನ್ನು ಸದರಿ ಆದೇಶದ ಅಡಿಯಲ್ಲಿ ಮಾಡಕೂಡದು; ಹಾಗೇನಾದರೂ ಈ ಆದೇಶದಡಿಯಲ್ಲಿ ನೇಮಕಾತಿ ಮಾಡಿದಲ್ಲಿ ಸಂಬಂಧಪಟ್ಟವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕ್ರಮ ವಹಿಸಲಾಗುವುದು. ಈ ಆದೇಶದಡಿಯಲ್ಲಿ ಮಂಜೂರಾದ ಯಾವುದೇ ಹುದ್ದೆ ಖಾಲಿಯಾದಲ್ಲಿ ಅದನ್ನು ಸಂಪೂರ್ಣವಾಗಿ ಶಾಶ್ವತ ಅನುದಾನರಹಿತವೆಂದು ಪರಿಗಣಿಸಿ, ಈ ಸಂಬಂಧ ತಗಲುವ ವೆಚ್ಚಗಳನ್ನು, ಸರ್ಕಾರಕ್ಕೆ ಯಾವುದೇ ವೆಚ್ಚ ಬಾರದಂತೆ, ಸಂಬಂಧಿಸಿದ ಶಿಕ್ಷಣ ಸಂಸ್ಥೆಗಳೇ ಭರಿಸುವ ಷರತ್ತಿನೊಂದಿಗೆ ನೇಮಕಾತಿ ಮಾಡಿಕೊಳ್ಳತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ದಿನಾಂಕ: 23-07-2005ರ ಅನಧಿಕೃತ ಟಿಪ್ಪಣಿ ಸಂಖ್ಯೆ. ಆಇ 705 ವೆಚ್ಚ 8/2005 ರಲ್ಲಿ ನೀಡಿದ ಸಹಮತಿಯಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

[ ಸಿದ್ಧಲಿಂಗಯ್ಯ ]
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ.

ಇವರಿಗೆ:

01) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು – 560001.
02) ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 003.
03) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
04) ಹೆಚ್ಚುವರಿ ಆಯುಕ್ತರು, ಧಾರವಾಡ/ಗುಲ್ಬರ್ಗಾ.
05) ನಿರ್ದೇಶಕರು, ಪ್ರೌಢ ಶಿಕ್ಷಣ/ಪ್ರಾಥಮಿಕ ಶಿಕ್ಷಣ, ಬೆಂಗಳೂರು, ಹೆಚ್ಚುವರಿ ಕಾರ್ಯದರ್ಶಿಗಳು-2, ಶಿಕ್ಷಣ ಇಲಾಖೆ.
06) ಸಹ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ,(ಯೋಜನಾ ಶಾಖೆ)
07) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ,(ವೆಚ್ಚ-8) ವಿಧಾನ ಸೌಧ, ಬೆಂಗಳೂರು.
08) ಆಂತರಿಕ ಆರ್ಥಿಕ ಸಲಹೆಗಾರರು, ಶಿಕ್ಷಣ ಇಲಾಖೆ.
09) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.